ಕರ್ನಾಟಕ ವಿಧಾನಸಭೆ

ಗುರುವಾರ 2ನೇ ಆಗಸ್ಟ್ 2001 ಸದನವು ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆ 50 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರಾದ (ಶ್ರೀ ಎಂ.ವಿ.ವೆಂಕಟಪ್ಪ) ಅವರು ಪೀಠದಲ್ಲಿ ಉಪಸ್ಥಿತರಿದ್ದರು.

ಅಧ್ಯಕ್ಷರು: ಇವತ್ತಿನ ಕಾರ್ಯಕ್ರಮದ ಪಟ್ಟಿಯ ಪ್ರಕಾರ ಮೊದಲು ಪ್ರಶ್ನೋತ್ತರ ಅವಧಿ ಇದೆ. ಅದನ್ನು ಕೈಗೆತ್ತಿಕೊಳ್ಳುವ ಮುನ್ನ ಒಂದು ಪ್ರಕಟಣೆ ಇದೆ.

1. ಪ್ರಕಟಣೆ

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ.

''ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಗಳ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು ದಿನಾಂಕ 1ನೇ ಆಗಸ್ಟ್ 2001ರಂದು ರೋರಿಕ್ ಮತ್ತು ದೇವಿಕರಾಣಿ ರೋರಿಕ್ ಎಸ್ಟೇಟ್ (ಆರ್ಜನೆ ಮತ್ತು ವರ್ಗಾವಣೆ) (ತಿದ್ದುಪಡಿ) ವಿಧೇಯಕ, 2001 ಮತ್ತು ಕರ್ನಾಟಕ ಅರಣ್ಯ (ತಿದ್ದುಪಡಿ) ವಿಧೇಯಕ, 2001 ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿದೆ ಎಂದು, ವಿಧಾನ ಸಭೆಯಿಂದ ಅಂಗೀಕರಿಸಬೇಕೆಂದು ಕೋರಿರುತ್ತಾರೆ.''

ಶ್ರೀ ಎ.ರಾಮದಾಸ್: ಮಾನ್ಯ ಅಧ್ಯಕ್ಷರೇ, ನಾವು ವಿಷಯವೊಂದನ್ನು ಪ್ರಸ್ತಾಪಿಸಲು ಅಡ್ಜರ್ನ್‌ಮೆಂಟ್ ಮೋಷನ್ ಕೊಟ್ಟಿದ್ದೆವು. ಅದರ ಬಗ್ಗೆ ಏನಾಯಿತು?

ಅಧ್ಯಕ್ಷರು: ಮೊದಲು ಪ್ರಶ್ನೋತ್ತರ ಅವಧಿ ಮುಗಿಯಲಿ. ಅನಂತರ ಸಬ್‌ಮಿಷನ್ ಮಾಡುವ ಸಲುವಾಗಿ ನಾನು ನಿಮಗೆ ಅವಕಾಶ ಮಾಡಿಕೊಡುತ್ತೇನೆ. ಇವತ್ತಿನ ಕಲಾಪ ಪಟ್ಟಿಯ ಪ್ರಕಾರ ಇಂದು 16 ಪ್ರಶ್ನೆಗಳು ಇವೆ. ದಯವಿಟ್ಟು ಯಾರು ಪ್ರಶ್ನೆಗಳನ್ನು ಕೇಳಿರುತ್ತಾರೋ ಅವರೇ ಉಪ ಪ್ರಶ್ನೆಗಳನ್ನು ಕೇಳಿದರೆ ಉತ್ತಮ ಎಂದು ನಾನು ತಮ್ಮಲ್ಲಿ ಕೋರುತ್ತೇನೆ. ದಯವಿಟ್ಟು ಎಲ್ಲರೂ ಸಹಕರಿಸಿ.